<u>ಕರ್ನಾಟಕ ವಿಧಾನ ಪರಿಷತ್ತು</u>

| | |
|---|---|
| ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ | 1518 |
| ಮಾನ್ಯ ಸದಸ್ಯರ ಹೆಸರು | ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 04/07/2016 |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಕಳೆದ 3 ವರ್ಷಗಳಲ್ಲಿ ನೂತನವಾಗಿ ಮಂಜೂರಾಗಿರುವ ಸರ್ಕಾರಿ ವಸತಿ ನಿಲಯಗಳ ಸಂಖ್ಯೆ ಎಷ್ಟು; ಅವು ಯಾವುವು: (ತಾಲ್ಲೂಕುವಾರು ವಿವರ ನೀಡುವುದು) | ರಾಜ್ಯದಲ್ಲಿ ಕಳೆದ 3 ವರ್ಷಗಳಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖಾ ವತಿಯಿಂದ 438 ವಿದ್ಯಾರ್ಥಿನಿಲಯಗಳು ಮಂಜೂರಾಗಿರುತ್ತವೆ. ತಾಲ್ಲೂಕುವಾರು ವಿವರಗಳನ್ನು ಅನುಬಂಧ-1ರಲ್ಲಿ ನೀಡಲಾಗಿದೆ. |
| ಆ) | ರಾಜ್ಯದಲ್ಲಿ ಕಳೆದ 3 ವರ್ಷಗಳಲ್ಲಿ ನೂತನವಾಗಿ ಮಂಜೂರಾಗಿರುವ ಸರ್ಕಾರಿ ವಸತಿ ನಿಲಯಗಳಲ್ಲಿ ಕಾಮಗಾರಿ ಪ್ರಾರಂಭಗೊಂಡ ವಸತಿನಿಲಯಗಳು ಎಷ್ಟು; ಅವು ಯಾವುವು; ಮುಕ್ತಾಯಗೊಂಡಿರುವ ಕಾಮಗಾರಿಗಳು ಎಷ್ಟು; ಅವು ಯಾವುವು; ಇನ್ನೂ ಪ್ರಾರಂಭವಾಗದಿರುವ ಕಾಮಗಾರಿಗಳ ಸಂಖ್ಯೆ ಎಷ್ಟು; ಅವು ಯಾವುವು; (ತಾಲ್ಲೂಕುವಾರು ವಿವರ ನೀಡುವುದು.) | ಕಳೆದ 3 ವರ್ಷಗಳಲ್ಲಿ ನೂತನವಾಗಿ ಮಂಜೂರಾಗಿರುವ ವಸತಿನಿಲಯಗಳಲ್ಲಿ ಕಾಮಗಾರಿಯನ್ನು ಕೈಗೊಂಡಿರುವುದಿಲ್ಲ ಆದರೆ ಈ ಹಿಂದಿನ ವರ್ಷಗಳಲ್ಲಿ ಮಂಜೂರಾದ ವಸತಿನಿಲಯಗಳ ಪೈಕಿ ಕಳೆದ 3 ವರ್ಷಗಳಲ್ಲಿ 201 ವಸತಿನಿಲಯಗಳ ಕಟ್ಟಡ ನಿರ್ಮಾಣ ಕಾಮಗಾರಿಯನ್ನು ಕೈಗೊಂಡಿದ್ದು 51 ಕಟ್ಟಡಗಳ ಕಾಮಗಾರಿ ಪೂರ್ಣಗೊಂಡಿರುತ್ತದೆ. 108 ವಿದ್ಯಾರ್ಥಿನಿಲಯ ಕಟ್ಟಡ ಕಾಮಗಾರಿಯು ಪ್ರಗತಿಯಲ್ಲಿರುತ್ತದೆ. ಇವುಗಳಲ್ಲಿ ಇನ್ನೂ 42 ಕಾಮಗಾರಿಗಳನ್ನು ಪ್ರಾರಂಭಿಸಬೇಕಿರುತ್ತದೆ. ನಿಲಯವಾರು, ತಾಲ್ಲೂಕುವಾರು ವಿವರಗಳನ್ನು ಅನುಬಂಧ-2ರಲ್ಲಿ ಲಗತ್ತಿಸಿದೆ. |
| ಇ) | ರಾಜ್ಯದಲ್ಲಿ ನೂತನವಾಗಿ ಮಂಜೂರಾಗಿರುವ ಸರ್ಕಾರಿ ವಸತಿನಿಲಯಗಳಲ್ಲಿ ಸೂಕ್ತ ನಿವೇಶನವಿಲ್ಲದೆ ಇಲ್ಲಿಯವರೆಗೆ ಕಾಮಗಾರಿ ಪ್ರಾರಂಭಗೊಳ್ಳದ ಸರ್ಕಾರಿ ವಸತಿನಿಲಯಗಳು ಎಷ್ಟು; ಅವು ಯಾವುವು; ಇವುಗಳಿಗೆ ಸೂಕ್ತ ನಿವೇಶನವನ್ನು ಹೊಂದಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು? (ತಾಲ್ಲೂಕುವಾರು ವಿವರ ನೀಡುವುದು) | ರಾಜ್ಯದಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಮಂಜೂರಾಗಿರುವ ವಿದ್ಯಾರ್ಥಿನಿಲಯಗಳಲ್ಲಿ 441 ನಿಲಯಗಳಿಗೆ ನಿವೇಶನ ಲಭ್ಯವಿಲ್ಲದೆ ಕಾಮಗಾರಿಗಳನ್ನು ಕೈಗೊಂಡಿರುವುದಿಲ್ಲ ಇವುಗಳ ತಾಲ್ಲೂಕುವಾರು ವಿವರಗಳನ್ನು ಅನುಬಂಧ-3ರಲ್ಲಿ ಲಗತ್ತಿಸಲಾಗಿದೆ.<br><br>ಸೂಕ್ತ ಸರ್ಕಾರಿ ನಿವೇಶನವನ್ನು ಪಡೆಯಲು ಅಥವಾ ಖಾಸಗಿ ನಿವೇಶನವನ್ನು ಖರೀದಿಸಿ ಒದಗಿಸುವಂತೆ ಎಲ್ಲಾ ಜಿಲ್ಲಾಧಿಕಾರಿಗಳನ್ನು ಕೋರಲಾಗಿದೆ. ದಿನಾಂಕ: 27.06.2016 ಮತ್ತು 28.06.2016 ರಂದು ನಡೆದ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಹಣಾಧಿಕಾರಿಗಳ ಸಭೆಯಲ್ಲಿ ಮಾನ್ಯ ಮುಖ್ಯಮಂತ್ರಿಗಳು ಈ ಕುರಿತು ಸೂಕ್ತ ನಿರ್ದೇಶನವನ್ನು ಜಿಲ್ಲಾಧಿಕಾರಿಗಳಿಗೆ ನೀಡಿರುತ್ತಾರೆ. |

ಆಯುಕ್ತರು
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ
ಬೆಂಗಳೂರು